ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿನ ಅವ್ಯವಹಾರದ ಬಗ್ಗೆ

ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

36 (156) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕಟ್ಟಡಗಳು ಇಲ್ಲದಿದ್ದರೂ ಹಾಗೂ ಅವಶ್ಯಕತೆ ಇಲ್ಲದಿದ್ದರೂ ವಿನಾ ಕಾರಣ ಸುಮಾರು 4 ರಿಂದ 5 ಕೋಟಿಗಳಷ್ಟು ಪೀಠೋಪಕರಣಗಳನ್ನು ಖರೀದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇಂತಹ ಅನಗತ್ಯ ವೆಚ್ಚವನ್ನು ಮಾಡಿ ಭ್ರಷ್ಟಾಚಾರವನ್ನು ಎಸಗಿರುವಂತಹ ವಿಶ್ವವಿದ್ಯಾಲಯದ ಹಿರಿಯ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?